# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1005 |
| ಸದಸ್ಯರ ಹೆಸರು: | ಡಾ|| ತಳವಾರ್ ಸಾಬಣ್ಣ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ: | 15.12.2025 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ಬೆಳಗಾವಿಯ ಹೋಟೆಲ್‌ಗಳಲ್ಲಿ ಕಲಬೆರಕೆ ಆಹಾರ ಪದಾರ್ಥಗಳು ಪೂರೈಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ) | ಆಹಾರದ ರುಚಿ ಹೆಚ್ಚಿಸುವ ಕಾರಣಕ್ಕೆ ವಿಷಕಾರಿ ಅಂಶಗಳಿರುವ ನಿಷೇದಿತ ಪದಾರ್ಥಗಳನ್ನು ಬೆರಸಿ ಲಾಭಗಳಿಸುತ್ತಿರುವ ಹೋಟೆಲ್ ಮಾಲೀಕರನ್ನು ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ. | ಹೋಟೆಲ್, ರೆಸ್ಟೋರೆಂಟ್ ಡಾಬಾ, ಕ್ಯಾಂಟೀನ್ ಮತ್ತು ಖಾನಾವಳಿಗೆ ಕಾಲಕಾಲಕ್ಕೆ ಪರಿಶೀಲನಾ ಭೇಟಿ ನೀಡಿ, ಸ್ವಚ್ಛತೆ ಹಾಗೂ ಆಹಾರ ಪದಾರ್ಥಗಳನ್ನು ಪರಿಶೀಲಿಸಲಾಗುತ್ತಿದೆ.<br>ಬೆಳಗಾವಿ ಜಿಲ್ಲೆಯಲ್ಲಿ ಕಳೆದ 2ವರ್ಷಗಳಲ್ಲಿ 264 ಹೋಟೆಲ್‌ಗಳಿಗೆ ಬೇಟಿ ನೀಡಿ ಪರಿಶೀಲಿಸಲಾಗಿದ್ದು, ಆಹಾರ ಸುರಕ್ಷತೆ ಮತ್ತು ಗುಣಪಟ್ಟ ಕಾಯ್ದೆ-2006 ಹಾಗೂ ನಿಬಂಧನೆಗಳು 2011ರ ನಿಯಮ ಉಲ್ಲಂಘಿಸಿದ ಆಹಾರ ಉದ್ದಿಮೆದಾರರಿಗೆ ರೂ.70,000/-ಗಳ ದಂಡ ವಿಧಿಸಲಾಗಿರುತ್ತದೆ.<br>ಹೋಟೆಲ್, ರೆಸ್ಟೋರೆಂಟ್ ಡಾಬಾ, ಕ್ಯಾಂಟೀನ್ ಮತ್ತು ಖಾನಾವಳಿಗಳಲ್ಲಿ ಒಟ್ಟು 74 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಅವುಗಳಲ್ಲಿ 05 ಮಾದರಿಗಳು ಅಸುರಕ್ಷಿತ ಎಂದು ವರದಿ ಬಂದಿದ್ದು, JMFC ನ್ಯಾಯಾಲಯದಲ್ಲಿ ಮೊಕ್ಕದ್ದಮೆ ಹೂಡಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತವೆ. |
| ಇ) | ಉತ್ತಮ ಮತ್ತು ಗುಣಮಟ್ಟದ ಆಹಾರ ಪದಾರ್ಥಗಳ ಪೂರೈಕೆಗೆ ದಿಢೀರ್ ಭೇಟಿ ನೀಡಬೇಕಾದ ಜಿಲ್ಲಾ ಆಡಳಿತ ಅಧಿಕಾರಿಗಳು ತಮ್ಮ ಜವಾಬ್ದಾರಿ ಮರೆತಂತಿದೆ. ಇಂತಹ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆಯೇ? ವಿವರ ನೀಡುವುದು) | ಉತ್ತಮ ಮತ್ತು ಗುಣಮಟ್ಟದ ಆಹಾರ ಪದಾರ್ಥಗಳ ಪೂರೈಕೆಗೆ ಸಂಬಂಧಿಸಿದಂತೆ ಅಧಿಕಾರಿಗಳು ಕಾಲಕಾಲಕ್ಕೆ ಆಹಾರ ಮಳಿಗೆಗಳಿಗೆ ಪರಿಶೀಲನಾ ಬೇಟಿ ನೀಡಿ ಸ್ವಚ್ಛತೆ ಹಾಗೂ ಆಹಾರ ಪದಾರ್ಥಗಳ ಗುಣಮಟ್ಟದ ಕುರಿತು ತಪಾಸಣೆ ಕೈಗೊಳ್ಳಲಾಗುತ್ತಿದೆ. |
| ಈ) | ಹಣ್ಣುಗಳಿಗೆ ರಾಸಾಯನಿಕ ಬಳಸುತ್ತಿರುವುದರಿಂದ ಇಡ್ಲಿ, ಟೋಮೊಟೋ ಸಾಸ್ ಮುಂತಾದವುಗಳು ಅಸುರಕ್ಷಿತವಾಗಿದ್ದು ಜನರಿಗೆ ಕ್ಯಾನ್ಸರ್ ನಂತಹ ಮಾರಕ ರೋಗಗಳು ಬರುತ್ತಿದ್ದು ಇದನ್ನು ತಡೆಗಟ್ಟಲು ಸರ್ಕಾರ ತಕ್ಷಣವೇ ಯಾವ ಕ್ರಮ ಕೈಗೊಳ್ಳಲಿದೆ? | ಕಳೆದ ಎರಡು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಹಣ್ಣುಗಳ 16 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಎಲ್ಲಾ ಮಾದರಿಗಳು ಸುರಕ್ಷಿತ ಎಂದು ವರದಿಯಾಗಿರುತ್ತದೆ ಹಾಗೂ ಟೊಮಾಟೋ ಸಾಸ್‌ಗಳ 14 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, 01 ಟೊಮಾಟೋ ಸಾಸ್ ಅಸುರಕ್ಷಿತ ಎಂದು ವರದಿಯಾಗಿದ್ದು JMFC ನ್ಯಾಯಾಲಯದಲ್ಲಿ ಮೊಕ್ಕದ್ದಮೆ ಹೂಡಲಾಗಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತವೆ. ಉಳಿದ ಮಾದರಿಗಳು ಸುರಕ್ಷಿತ ಎಂದು ವರದಿಯಾಗಿರುತ್ತದೆ. |

ಆಕುಕ 174 ಎಸ್‌ಬಿವಿ 2025

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು